**ದಿನಾಂಕ: 05.03.2022 ರಂದು ಬೆಳಗ್ಗೆ 11:00 ಗಂಟೆಗೆ ವಾರ್ಡ್ ಸಂಖ್ಯೆ 166 ಕರೀಸಂದ್ರ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡುವಳಿಗಳು.**

***ಹಾಜರಿದ್ದ ಅಧಿಕಾರಿಗಳು:–***

1. ಶ್ರೀ. ಪ್ರದೀಪ್ ರಾಥೋಡ್ – ಅಧ್ಯಕ್ಷರು ಮತ್ತು ನೋಡೆಲ್ ಅಧಿಕಾರಿಗಳು.
2. ಶ್ರೀ. ಯತೀಶ್. ಎ.ಜೆ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 166 ಕರೀಸಂದ್ರ)
3. ಶ್ರೀಮತಿ. ಲೀಲಾವತಿ – ಕಂದಾಯ ವಸೂಲಿಗಾರರು (ವಾರ್ಡ್ 166 ಕರೀಸಂದ್ರ)
4. ಶ್ರೀ. ರುದ್ರೇಶ್ – ಸಹಾಯಕ ಅಭಿಯಂತರರು (ಬೆಸ್ಕಾಂ)
5. ಶ್ರೀ. ನರಸಿಂಹಲು – ಹಿ.ಆ.ಪ– (ವಾರ್ಡ್ 166 ಕರೀಸಂದ್ರ)
6. ಶ್ರೀ. ಬಾಬು – ಕಿ.ಆ.ಪ (ವಾರ್ಡ್ 166 ಕರೀಸಂದ್ರ)
7. ಟ್ರಾಫಿಕ್ ಪೋಲೀಸ್ ಇಲಾಖೆ ಜಯನಗರ/ ಬನಶಂಕರಿ ಹಾಗೂ ಕಾನೂನು ಮತ್ತು ಸುವ್ಯವಸ್ಥೆಯ ಪೊಲೀಸ್ ಅಧಿಕಾರಿಗಳು.
8. 7ನೇ ಬ್ಲಾಕ್ ಜಯನಗರ ಮತ್ತು ಕಾವೇರಿನಗರ ಸಂಘ ಸಂಸ್ಥೆಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳು.

ಮೇಲೆ ಹಾಜರಿದ್ದ ಅಧಿಕಾರಿಗಳು ಹಾಗೂ ಸಮಿತಿ ಸದಸ್ಯರ ಸಮ್ಮುಖದಲ್ಲಿ ವಾರ್ಡ್ ಸಂಖ್ಯೆ 166 ರ ಕಾರ್ಯದರ್ಶಿಗಳು ಹಾಗೂ ಸಹಾಯಕ ಅಭಿಯಂತರರು ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ವಾರ್ಡಿನಲ್ಲಿ ರಸ್ತೆಗುಂಡಿಗಳ ಬಗ್ಗೆ ಚರ್ಚಿಸಲಾಗಿ ಹೊಸದಾಗಿ ಗುರುತಿಸಲಾದ ರಸ್ತೆಗುಂಡಿಗಳನ್ನು ಜಲಮಂಡಳಿ ಅಗೆತಗಳು ಹಾಗೂ ಇನ್ನಿತರೆ ಅಗೆತಗಳಿಗೆ ಸಂಬಂಧಪಟ್ಟಿರುವುದರಿಂದ ರಸ್ತೆಗುಂಡಿಗಳನ್ನು ಮುಚ್ಚಲು ಅಗತ್ಯಕ್ರಮ ಕೈಗೊಳ್ಳುವ ಬಗ್ಗೆ ಅಧ್ಯಕ್ಷರು ರವರು ತುರ್ತಾಗಿ ನಿರ್ವಹಿಸಲು ಜಲಮಂಡಳಿ ಅಧಿಕಾರಿಗಳಿಗೆ ಸೂಚಿಸಲಾಯಿತು.

ಸಮಿತಿ ಸಭೆಯಲ್ಲಿ ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಕಂಡುಬಂದಿರುವ ಕೋವಿಡ್–19 ರೋಗಿಗಳ ವಿವರಗಳನ್ನು ವಾರ್ಡ್‌ನ ಹಿರಿಯ ಆರೋಗ್ಯ ಪರಿವೀಕ್ಷಕರಿಂದ ಕಳೆದ ನಾಲ್ಕು ತಿಂಗಳಿನ ಟೆಸ್ಟಿಂಗ್ ಮಾಹಿತಿಯನ್ನು ನೀಡಲು ಅಧ್ಯಕ್ಷರು ಸೂಚಿಸಿದರು. ಸದರಿ ರೋಗದ ಹರಡುವಿಕೆಯನ್ನು ತಡೆಗಟ್ಟುವ ಸಂಬಂಧ ಕೈಗೊಳ್ಳಲಾಗುತ್ತಿರುವ ಕ್ರಮಗಳ ಕುರಿತು ಚರ್ಚಿಸಿದಂತೆ ಕೋವಿಡ್–19 ಟೆಸ್ಟಿಂಗ್ ಕಾರ್ಯವನ್ನು ವಾರ್ಡ್ ವ್ಯಾಪ್ತಿಯಲ್ಲಿ ಹೆಚ್ಚುವರಿಯಾಗಿ ಕೈಗೊಳ್ಳಲು ಕ್ರಮ ವಹಿಸಲಾಗಿರುತ್ತದೆ.

ವಾರ್ಡ್ ವ್ಯಾಪ್ತಿಯಲ್ಲಿ ಕಳೆದ 15 ದಿನಗಳಿಂದ ಸ್ವೀಕೃತವಾಗಿರುವ ಅಂತರ್ಜಾಲ ದೂರುಗಳು, ಲಿಖಿತ ದೂರುಗಳು ಹಾಗೂ ಸಾರ್ವಜನಿಕರ ಮೌಖಿಕ ದೂರುಗಳು ಹಾಗೂ ಇನ್ನಿತರೆ ಸ್ಥಳೀಯ ಸಂಸ್ಥೆಗಳಿಂದ ದೂರುಗಳನ್ನು ಕಾಲಕಾಲಕ್ಕೆ ಪರಿಹಾರ ಮಾಡಲಾಗಿರುವ ಬಗ್ಗೆ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಿಗೆ ವಿವರಿಸಲಾಯಿತು.

ಮು.ತಿ.ನೋ

ಸದಸ್ಯರು ಮಾತನಾಡಿ ಕರೀಸಂದ್ರ ವಾರ್ಡ್‌ನ ಕೆಲವು ರಸ್ತೆಗಳ ಬೀದಿ ದೀಪಗಳು ಸರಿಯಾಗಿ ಕಾರ್ಯನಿರ್ವಹಿಸದೇ ಇರುವ ಬಗ್ಗೆ ಹಾಗೂ ಅದನ್ನು ಕೂಡಲೇ ಸರಿಪಡಿಸುವ ಬಗ್ಗೆ ಕೋರಿದರ ಮೇರೆಗೆ ಅಧ್ಯಕ್ಷರು ಸದರಿ ಸಮಸ್ಯೆಯನ್ನು ವಿದ್ಯುತ್ ದಕ್ಷಿಣ ವಿಭಾಗದೊಂದಿಗೆ ಸಮನ್ವಯ ಕೈಗೊಂಡು ಸಮಸ್ಯೆಯನ್ನು ಪರಿಹರಿಸುವಂತೆ ಕಾರ್ಯದರ್ಶಿಗಳಿಗೆ ಸೂಚಿಸಿದರು.

ವಾರ್ಡ್ ಸಮಿತಿ ಸಭೆಯಲ್ಲಿ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ವಾರ್ಡ್ ವ್ಯಾಪ್ತಿಯ ಜಲಮಂಡಳಿ, ಬೆಸ್ಕಾಂ, ಘನತ್ಯಾಜ್ಯ ವಿಲೇವಾರಿ, ಆರೋಗ್ಯ ಇಲಾಖೆ, ಕಂದಾಯ, ಕಾಮಗಾರಿ ಇಲಾಖೆಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳು ಹಾಗೂ ಪರಿಹಾರೋಪಾಯಗಳು ತೆಗೆದುಕೊಳ್ಳಬಹುದಾದ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

ಮೇಲಿನ ವಿಷಯಗಳ ಬಗ್ಗೆ ಶ್ರೀ. ಯತೀಶ್. ಎ.ಜೆ ರವರು ಮಾತನಾಡಿ, ವಾರ್ಡ್ ವ್ಯಾಪ್ತಿಯಲ್ಲಿನ ಮೂಲಭೂತ ಸೌಕರ್ಯಗಳಾದ ರಸ್ತೆಗುಂಡಿ ಮುಚ್ಚುವಿಕೆ, ಕಟ್ಟಡ ತ್ಯಾಜ್ಯ ವಿಲೇವಾರಿ, ಘನತ್ಯಾಜ್ಯ ವಿಲೇವಾರಿ, ಬೆಸ್ಕಾಂ ಸಂಬಂಧಿತ, ಜಲಮಂಡಳಿ ಸಂಬಂಧಿತ, ಆರೋಗ್ಯ ಇಲಾಖೆ ಹಾಗೂ ಇನ್ನಿತರೆ ಸೌಲಭ್ಯಗಳಿಗೆ ಸಂಬಂಧಿಸಿದಂತೆ ಸಮರ್ಪಕ ಕಾರ್ಯನಿರ್ವಹಣೆಯ ಬಗ್ಗೆ ಆಯಾ ಇಲಾಖೆಗಳ ಸಂಬಂಧಪಟ್ಟ ಅಧಿಕಾರಿಗಳೊಂದಿಗೆ ಸಮನ್ವಯ ಸಾಧಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸದಸ್ಯರಿಗೆ ಮತ್ತು ಅಧ್ಯಕ್ಷರಿಗೆ ವಿವರಿಸಿದರು.

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಗಳಾದ ಶ್ರೀ. ಪ್ರದೀಪ್ ರಾಥೋಡ್ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.



ಸದಸ್ಯ ಕಾರ್ಯದರ್ಶಿ ಹಾಗೂ
ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ 166